ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 21/3/2010

# ಕೆಪಿಎಸ್‌ಸಿ ಅಭ್ಯರ್ಥಿಗಳ ಬಗ್ಗೆ ಸಂಪುಟದಲ್ಲಿ ತೀರ್ಮಾನ

21/3/10

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ರಾಜ್ಯ ಲೋಕಸೇವಾ ಆಯೋಗದಿಂದ 2011ರಲ್ಲಿ ನೇಮಕಗೊಂಡ 362 ಗೆಜೆಟೆಡ್ ಪ್ರೊಬೆಷನರಿ ಅಭ್ಯರ್ಥಿಗಳ ಭವಿಷ್ಯ ಕುರಿತಂತೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅಂತಿಮ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಯಡಿಯೂರಪ್ಪ ಭರವಸೆ ನೀಡಿದ್ದಾರೆ.



ವಿಧಾನಸಭೆಯಲ್ಲಿ ನಿಯಮ 69ರಡಿ ಕಾಂಗ್ರೆಸ್‌ನ ಎಚ್.ಕೆ.ಪಾಟೀಲ್, ಜೆಡಿಎಸ್‌ನ ಎಚ್.ಡಿ.ರೇವಣ್ಣ ಸೇರಿದಂತೆ ಹಲವು ಶಾಸಕರು ಮಾಡಿದ ಪ್ರಸ್ತಾಪಕ್ಕೆ ಉತ್ತರಿಸಿದ ಅವರು, ಈ ಕುರಿತು ದಿಢೀರನೆ ತೀರ್ಮಾನ ಕೈಗೊಳ್ಳಲು ಸಾಧ್ಯವಿಲ್ಲ. ಕರ್ನಾಟಕ ನ್ಯಾಯ ಮಂಡಳಿ, ಹೈಕೋರ್ಟ್ ಹಾಗೂ ಸರ್ವೋಚ್ಚ ನ್ಯಾಯಾಲಯಗಳಲ್ಲಿ ಪ್ರಕರಣ ಇರುವುದರಿಂದ ಸಂಪುಟ ಸಭೆಯಲ್ಲಿ ಚರ್ಚಿಸುವುದಾಗಿ ತಿಳಿಸಿದರು.

ಇದಕ್ಕೂ ಮುನ್ನ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಮಾತನಾಡಿ, 362 ಅಭ್ಯರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದಂತೆ ಸರಕಾರಿ ಆದೇಶ ಹೊರಡಿಸಬೇಕೇ? ಸುಗ್ರೀವಾಜ್ಞೆಯ ಮೂಲಕ ಅವಕಾಶ ಕಲ್ಪಿಸಬೇಕೇ? ಅಥವಾ ನ್ಯಾಯಾಲಯದ ಮುಂದೆ ಅರ್ಜಿ ಸಲ್ಲಿಸಿ ಹಿಂದಿನ ಸರ್ಕಾರ ನೇಮಕಾತಿಗೆ ಆಕ್ಷೇಪ ವ್ಯಕ್ತಪಡಿಸದೆ ಇರುವುದನ್ನು ಪರಿಗಣಿಸಬೇಕೇ? ಎಂಬುದನ್ನು ಪರಾಮರ್ಶಿಸಲಾಗುವುದು ಎಂದು ಹೇಳಿದರು.

ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷರು, ಸದಸ್ಯರ ಮೇಲೆ ಈ ನೇಮಕಾತಿ ವಿಷಯದಲ್ಲಿ ಯಾವ ದೂರುಗಳು ಅಥವಾ ಪ್ರಕರಣ ಕೂಡಾ ದಾಖಲಾಗಿಲ್ಲ ಎಂದರು.

ಹೀಗಾಗಿ ಇದನ್ನು ಗಂಭೀರವಾಗಿ ಪರಿಗಣಿಸಲಾಗುವುದು. 362 ಅಭ್ಯರ್ಥಿಗಳ ಭವಿಷ್ಯ ಕುರಿತು ನಿರ್ಣಯ ಕೈಗೊಳ್ಳಲಾಗುವುದು ಎಂದರು.

ಇದಕ್ಕೂ ಮುನ್ನ ಸದನದಲ್ಲಿ ನಡೆದ ಚರ್ಚೆಯಲ್ಲಿ ಎಚ್.ಕೆ.ಪಾಟೀಲ್, ಎಚ್.ಡಿ.ರೇವಣ್ಣ ಸೇರಿದಂತೆ ಹಲವರು ಪಾಲ್ಗೊಂಡು ಮಾತನಾಡಿ, 2011 ರಲ್ಲಿ 362 ಮಂದಿ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳಿಗೆ ನೇಮಕಾತಿ ಮಾಡಲಾಗಿತ್ತು. ಆದರೆ ಅದನ್ನು ನಂತರ ಬಂದ ಸರ್ಕಾರ ರದ್ದುಗೊಳಿಸಿತ್ತು.

ಈ ತೀರ್ಮಾನದ ವಿರುದ್ಧ ಅಭ್ಯರ್ಥಿಗಳು ನ್ಯಾಯಾಲಯಕ್ಕೆ ಹೋದರು. ಆದರೆ ಅವರ ಭವಿಷ್ಯ ಇನ್ನೂ ಅತಂತ್ರವಾಗಿದೆ. ಸರಕಾರ ತಕ್ಷಣವೇ ಅವರ ವಿಷಯದಲ್ಲಿ ಸೂಕ್ತ ತೀರ್ಮಾನಕ್ಕೆ ಬರಬೇಕು. ಅವರ ಭವಿಷ್ಯ ಕಾಪಾಡಬೇಕು ಎಂದು ಮನವಿ ಮಾಡಿಕೊಂಡರು. ಯಾವುದೋ ಪ್ರತಿಷ್ಠೆಗಳ ಹಿನ್ನೆಲೆಯಲ್ಲಿ ಈ ಅಭ್ಯರ್ಥಿಗಳ ಜೀವನ ಹಾಳಾಗಬಾರದು. ಆದ್ದರಿಂದ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಲಿ ಎಂದು ಪಕ್ಷಾತೀತವಾಗಿ ಶಾಸಕರು ರಾಜ್ಯ ಸರಕಾರವನ್ನು ಒತ್ತಾಯಿಸಿದರು.